# 11. ಹೆಣ್ಣು ಮಕ್ಕಳಿಗೆ ಸಮಾನ ಆಸ್ತಿ ಹಕ್ಕು

ಅವಿಭಕ್ತ ಕುಟುಂಬದ ಹೆಣ್ಣುಮಕ್ಕಳಿಗೆ ಹಿಂದೂ ಉತ್ತರಾಧಿಕಾರ (ತಿದ್ದುಪಡಿ) ಕಾಯ್ದೆ ಪ್ರಕಾರ, ಪಿತ್ರಾರ್ಜಿತ ಆಸ್ತಿಯಲ್ಲಿ ಸಮಾನ ಹಕ್ಕುಗಳಿವೆ ಎಂದು ಸುಪ್ರೀಂಕೋರ್ಟ್ ಮಹತ್ವದ ತೀರ್ಪು ನೀಡಿದೆ.

ತಿದ್ದುಪಡಿ ಕಾಯ್ದೆ ಜಾರಿಗೆ ಬರುವ ಮುನ್ನ ಒಂದು ವೇಳೆ ತಂದೆ ತೀರಿಕೊಂಡಿದ್ದರೂ, ಪಿತ್ರಾರ್ಜಿತ ಆಸ್ತಿಯಲ್ಲಿ ಹೆಣ್ಣುಮಕ್ಕಳು ಸಮಾನ ಹಕ್ಕು ಹೊಂದಿರುತ್ತಾರೆ. 2005ರಲ್ಲಿ ಕಾಯ್ದೆಗೆ ತರಲಾದ ತಿದ್ದುಪಡಿಯು ಪೂರ್ವಾನ್ವಯ ಆಗಲಿದೆ ಎಂದು ಸುಪ್ರೀಂ ಕೋರ್ಟ್ ಸ್ಪಷ್ಟ ಪಡಿಸಿದೆ. ನ್ಯಾಯಮೂರ್ತಿಗಳಾದ ಅರುಣ್ ಮಿಶ್ರಾ. ಎಸ್.ಅಬ್ದುಲ್ ನಜೀರ್ ಹಾಗೂ ಎಂ.ಆರ್.ಶಾ ಅವರ ನ್ಯಾಯಪೀಠ ಈ ತೀರ್ಪು ನೀಡಿದೆ.

‘ಕಾಯ್ದೆಯು ತಿದ್ದುಪಡಿಗೊಂಡು ಜಾರಿಗೆ ಬಂದ ನಂತರ ಅಥವಾ ಅದಕ್ಕೂ ಮೊದಲೇ ಜನಿಸಿದ ಗಂಡು ಮಕ್ಕಳಿಗೆ ಪಿತ್ರಾರ್ಜಿತ ಆಸ್ತಿ ಮೇಲೆ ಯಾವ ಹಕ್ಕುಗಳಿವೆಯೋ ಅವೇ ಹಕ್ಕುಗಳು ಹೆಣ್ಣುಮಕ್ಕಳಿಗೂ ಇವೆ’ ಎಂದು ನ್ಯಾಯಪೀಠ ಹೇಳಿದೆ.

‘ಮಗಳು ಸದಾ ಮಗಳಾಗಿಯೇ ಇರುತ್ತಾಳೆ. ಆದರೆ, ಮಗ ಮದುವೆ ಆಗುವವರೆಗೆ ಮಾತ್ರ ಮಗನಾಗಿ ಇರುತ್ತಾನೆ’ ಎಂದು ನ್ಯಾಯಮೂರ್ತಿ ಮಿಶ್ರಾ ಹೇಳಿದರು.

ಈ ಹಿಂದೆ, ಎರಡು ನ್ಯಾಯಪೀಠಗಳು ಭಿನ್ನ ತೀರ್ಪು ನೀಡಿದ್ದರಿಂದ ಹಿಂದೂ ಉತ್ತರಾಧಿಕಾರ ಕಾಯ್ದೆಯ ವಿಚಾರದಲ್ಲಿ ಗೊಂದಲ ಸೃಷ್ಟಿಯಾಗಿತ್ತು. ಈ ಗೊಂದಲದಿಂದಾಗಿ ಹೈಕೋರ್ಟ್‌ಗಳು ಮತ್ತು ಕೆಳ ನ್ಯಾಯಾಲಯಗಳಲ್ಲಿ ಹಲವು ಪ್ರಕರಣಗಳು ಬಾಕಿ ಇವೆ. ಈ ಪ್ರಕರಣಗಳ ತೀರ್ಪು ಈಗಾಗಲೇ ವಿಳಂಬ ಆಗಿದೆ. ಆರು ತಿಂಗಳೊಳಗೆ ಈ ಎಲ್ಲ ಪ್ರಕರಣಗಳನ್ನು ಇತ್ಯರ್ಥ ಮಾಡಬೇಕು ಎಂದು ಪೀಠವು ಸೂಚಿಸಿದೆ.

ಆಧಾರ:ಪ್ರಜಾವಾಣಿ, ದಿನಾಂಕ:12.08.2020